ಲಿಖಿತ ಮೂಲಕ ಉತ್ತರಿಸುವ

ಕರ್ನಾಟಕ ವಿಧಾನ ಪರಿಷತ್ತು

ನೂರ ಮೂವತ್ತೆಂಟನೆಯ ಅಧಿವೇಶನ

ಮಂಗಳವಾರ, ದಿನಾಂಕ : 23ನೇ ಜುಲೈ, 2019

ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಸೇವೆ ಸಲ್ಲಿಸುತ್ತಿರುವ ಅತಿಥಿ ಉಪನ್ಯಾಸಕರ ಸಮಸ್ಯೆಗಳ ಕುರಿತು

ಶ್ರೀ ನಿರಾಣಿ ಹಣಮಂತ್ ರುದ್ರಪ್ಪ (ಪದವೀಧರರ ಕ್ಷೇತ್ರ):-

518 (484) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಸೇವೆ ಸಲ್ಲಿಸುತ್ತಿರುವ ಅತಿಥಿ ಉಪನ್ಯಾಸಕರ ವಿವಿಧ ಸಮಸ್ಯೆಗಳು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ವಯೋಮಿತಿ ಮೀರಿದ ಮತ್ತು ಮೀರುತ್ತಿರುವ ಅತಿಥಿ ಉಪನ್ಯಾಸಕರಿಗೆ "ಸೇವಾಭದ್ರತೆ" ಒದಗಿಸಲು ಸರ್ಕಾರ ಮುಂದಾಗುವುದೇ ;

(ಇ) ಕಳೆದ ಸದನದಲ್ಲಿ ನೀಡಿದ ಭರವಸೆಯಂತೆ ಸದರಿ ಅತಿಥಿ ಉಪನ್ಯಾಸಕರುಗಳಿಗೆ ಗೌರವಧನವನ್ನು ರೂ. 25.000 ಗಳಿಗೆ ಹೆಚ್ಚಿಸಲಾಗಿದೆಯೇ ;

(ಈ) ಹೆಚ್ಚಿಸಿದ್ದಲ್ಲಿ ಯಾವ-ಯಾವ ಜಿಲ್ಲೆಯ ಉಪನ್ಯಾಸಕರುಗಳು ಸದರಿ ಗೌರವಧನ ಪಡೆಯುತ್ತಿದ್ದಾರೆ ; (ಸಂಪೂರ್ಣ ಮಾಹಿತಿ ನೀಡುವುದು)

(ಉ) ಇಲ್ಲವಾದಲ್ಲಿ ವಿಳಂಭವಾಗಿರುವುದಕ್ಕೆ ಕಾರಣಗಳೇನು ;

(ಊ) ಯಾವ ಕಾಲಮಿತಿಯಲ್ಲಿ ಅತಿಥಿ ಉಪನ್ಯಾಸಕರ ಗೌರವಧನವನ್ನು ಹೆಚ್ಚಿಸಲಾಗುವುದು ?